All India Radio: Bangalore
National Bulletin In Kannada
07.10.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<> <> <> <>

ಮುಖ್ಯಾಂಶಗಳು

- ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಸಲು ಚುನಾವಣಾ ಆಯೋಗ ನಿರ್ಧಾರ
- ಮುಂಬೈನಲ್ಲಿ ಇಂದು ೬ನೇ ಆವೃತ್ತಿಯ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್ ಆರಂಭ
- ವಿವಿಧ ಪಕ್ಷಗಳ ಸದನದ ನಾಯಕರೊಂದಿಗೆ ಇಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸಭೆ
- ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್: ನ್ಯೂಜಿಲೆಂಡ್ ವಿರುದ್ಧ ದಕ್ಷಿಣ ಆಫ್ರಿಕಾ ತಂಡಕ್ಕೆ ೬ ವಿಕೆಟ್‌ಗಳ ಗೆಲುವು

><><><><><

ಬಿಹಾರದ ವಿಧಾನಸಭಾ ಚುನಾವಣೆಯ ವೇಳಾಪಟ್ಟಿ ಘೋಷಣೆಯಾಗಿದ್ದು, ಬರುವ ನವೆಂಬರ್ ೬ ಮತ್ತು ೧೧ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಮತ ಎಣಿಕೆ ಕಾರ್ಯ ನನವೆಂಬರ್ ೧೪ ರಂದು ನಡೆಯಲಿದೆ. ಚುನಾವಣಾ ಆಯೋಗ ನಿನ್ನೆ ೨೪೩ ಸದಸ್ಯ ಬಲದ ಬಿಹಾರ ವಿಧಾನಸಭಾ ಚುನಾವಣೆಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಚುನಾವಣಾ ವೇಳಾಪಟ್ಟಿ ಘೋಷಣೆಯೊಂದಿಗೆ, ಬಿಹಾರದಲ್ಲಿ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ.

ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ರಾಜ್ಯದ ಏಳು ಕೋಟಿ ೪೩ ಲಕ್ಷ ಮತದಾರರಿಗಾಗಿ ೯೦ ಸಾವಿರ ೭೧೨ ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದರು. ಮೊದಲ ಹಂತದ ಮತದಾನಕ್ಕೆ ಈ ತಿಂಗಳ ೧೦ ರಂದು ಅಧಿಸೂಚನೆ ಹೊರಡಿಸಲಾಗುವುದು ಮತ್ತು ಅಭ್ಯರ್ಥಿಗಳು ಇದೇ ೧೭ ರವರೆಗೆ ನಾಮಪತ್ರ ಸಲ್ಲಿಸಬಹುದು. ಎರಡನೇ ಹಂತದ ಮತದಾನಕ್ಕೆ ಈ ತಿಂಗಳ ೧೩ ರಂದು ಅಧಿಸೂಚನೆ ಹೊರಡಿಸಲಾಗುವುದು ಮತ್ತು ಇದೇ ೨೦ ರವರೆಗೆ ನಾಮಪತ್ರ ಸಲ್ಲಿಸಬಹುದು ಎಂದು ಮಾಹಿತಿ ನೀಡಿದರು.  ಈ ಬಾರಿ ಪ್ರತಿ ಕ್ಷೇತ್ರದಲ್ಲಿ ಮೊದಲ ಬಾರಿಗೆ ಒಬ್ಬ ಸಾಮಾನ್ಯ ವೀಕ್ಷಕರನ್ನು ನಿಯೋಜಿಸಲಾಗುವುದು. ಚುನಾವಣಾ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಮೇಲ್ವಿಚಾರಣೆ ಮಾಡಲು ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ಮಾಡಲಾಗುವುದು ಎಂದು ಜ್ಞಾನೇಶ್ ಕುಮಾರ್ ಹೇಳಿದರು. ಇದರ ಜೊತೆಗೆ ಮುಖ್ಯ ಚುನಾವಣಾ ಆಯುಕ್ತರು ಏಳು ರಾಜ್ಯಗಳ ಎಂಟು ವಿಧಾನಸಭಾ ಸ್ಥಾನಗಳಿಗೆ ಉಪಚುನಾವಣೆಯನ್ನು ಘೋಷಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಬುದ್ಗಮ್ ಮತ್ತು ನಾಗ್ರೋಟಾ, ರಾಜಸ್ಥಾನದ ಅಂತಾ, ಜಾರ್ಖಂಡ್‌ನ ಘಾಟ್ಸಿಲಾ, ತೆಲಂಗಾಣದ ಜುಬಿಲಿ ಹಿಲ್ಸ್, ಪಂಜಾಬ್‌ನ ತರಣ್‌ತರಣ್, ಮಿಜೋರಾಂನ ದಂಪಾ ಮತ್ತು ಒಡಿಶಾದ ನುವಾಪದ ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನವೆಂಬರ್ ೧೧ ರಂದು ನಡೆಯಲಿದ್ದು, ಮತ ಎಣಿಕೆ ನವೆಂಬರ್ ೧೪ ರಂದು ನಡೆಯಲಿದೆ.

><><><><

ಚುನಾವಣಾ ಆಯೋಗ ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ನಡೆಸಲು ನಿರ್ಧರಿಸಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ಪ್ಯಾನ್-ಇಂಡಿಯಾ ಎಸ್‌ಐಆರ್ ರಚಿಸುವ ಕಾರ್ಯ ಪ್ರಗತಿಯಲ್ಲಿದೆ. ಈ ಕುರಿತು ಚುನಾವಣಾ ಆಯೋಗ ದಿನಾಂಕಗಳನ್ನು ನಿರ್ಧರಿಸುತ್ತದೆ ಮತ್ತು ಔಪಚಾರಿಕ ಘೋಷಣೆ ಮಾಡುತ್ತದೆ ಎಂದು ಹೇಳಿದರು. ಎಸ್‌ಐಆರ್ ಪ್ರಕ್ರಿಯೆಯನ್ನು ಬಿಹಾರದಲ್ಲಿ ಚುನಾವಣಾ ಆಯೋಗ ನಡೆಸಿತು. ಇದರ ಪರಿಣಾಮವಾಗಿ ನಿಧನರಾದವರು, ಅಕ್ರಮ ವಲಸಿಗರ ಸೇರ್ಪಡೆ ಮತ್ತು ನಕಲಿ ಮತದಾರರ ಗುರುತಿನ ಚೀಟಿಗಳಿಂದಾಗಿ ೬೫ ಲಕ್ಷ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಈ ಪ್ರಕ್ರಿಯೆಯ ನಂತರ ಬಿಹಾರದಲ್ಲಿ ಒಟ್ಟು ಮತದಾರರ ಸಂಖ್ಯೆ ೭ ಕೋಟಿ ೪೨ ಲಕ್ಷ ಆಗಿದೆ ಎಂದು ಅವರು ಮಾಹಿತಿ ನೀಡಿದರು. ಬಿಹಾರದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಉಪಕ್ರಮವು ಸ್ಪಷ್ಟ ಮತ್ತು ಹೆಚ್ಚು ನಿಖರವಾದ ಮತದಾರರ ಪಟ್ಟಿಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ಮುಖ್ಯ ಚುನಾವಣಾ ಆಯುಕ್ತರು ಹೇಳಿದರು.

><><><><

೬ನೇ ಆವೃತ್ತಿಯ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್ ಇಂದು ಮುಂಬೈನಲ್ಲಿ ಆರಂಭವಾಗಲಿದೆ. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಮುಖ್ಯ ಭಾಷಣ ಮಾಡಲಿದ್ದಾರೆ. ಉದ್ಯಮ ತಜ್ಞರು, ನೀತಿ ನಿರೂಪಕರು ಮತ್ತು ನಾವೀನ್ಯಕಾರರೊಂದಿಗೆ ತೊಡಗಿಸಿಕೊಳ್ಳಲಿದ್ದಾರೆ.

ಗ್ಲೋಬಲ್ ಫಿನ್‌ಟೆಕ್ ಫೆಸ್ಟ್ ೨೦೨೫ ಎರಡೂ ದೇಶಗಳ ಅತ್ಯುನ್ನತ, ದಾರ್ಶನಿಕ ನಾಯಕರಿಂದ ಮಾರ್ಗದರ್ಶನ ಪಡೆಯಲು ಹಾಗೂ ರಫ್ತು ಮತ್ತು ನಾವೀನ್ಯತೆಯಲ್ಲಿ ಬ್ರಿಟನ್‌ನ ಜಾಗತಿಕ ನಾಯಕತ್ವ ಮತ್ತು ಭಾರತದ ಸಾಟಿಯಿಲ್ಲದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಮತ್ತು ಶತಕೋಟಿಗೂ ಹೆಚ್ಚು ಗ್ರಾಹಕರ ನೆಲೆಯ ನಡುವಿನ ಬಂಧವನ್ನು ಅನ್ವೇಷಿಸಲು ಅಪರೂಪದ ಅವಕಾಶವನ್ನು ಒದಗಿಸುತ್ತದೆ ಎಂದು ಗ್ಲೋಬಲ್ ಫಿನ್‌ಟೆಕ್ ಫೆಸ್ಟ್ ೨೦೨೫ ರ ಅಧ್ಯಕ್ಷರಾದ ಕ್ರಿಸ್ ಗೋಪಾಲಕೃಷ್ಣನ್ ಹೇಳಿದ್ದಾರೆ.

><><><><

ಉಪರಾಷ್ಟ್ರಪತಿ ಮತ್ತು ರಾಜ್ಯಸಭೆ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ವಿರೋಧ ಪಕ್ಷಗಳು ಸೇರಿದಂತೆ ವಿವಿಧ ಪಕ್ಷಗಳ ಸದನದ ನಾಯಕರನ್ನು ಭೇಟಿ ಮಾಡಲಿದ್ದಾರೆ. ಮೇಲ್ಮನೆಯ ಅಧ್ಯಕ್ಷರಾಗಿ ಚುನಾಯಿತ ಪ್ರತಿನಿಧಿಗಳೊಂದಿಗೆ ಅವರ ಮೊದಲ ಔಪಚಾರಿಕ ಸಭೆ ಇದಾಗಲಿದೆ. ಈ ಸಭೆಯು ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೆ ಪೂರ್ವಭಾವಿಯಾಗಿದ್ದು, ಮುಂದಿನ ತಿಂಗಳು ಸಂಸತ್ತಿನ ಚಳಿಗಾಲದ ಅಧಿವೇಶನ ಪ್ರಾರಂಭವಾಗುವ ಸಾಧ್ಯತೆಯಿದೆ. ಸದನದ ನಾಯಕರೊಂದಿಗೆ ಉಪರಾಷ್ಟ್ರಪತಿಗಳ ಔಪಚಾರಿಕ ಸಭೆಯಲ್ಲಿ ಮುಂಬರುವ ಅಧಿವೇಶನದಲ್ಲಿ ಸದನದ ಸುಗಮ ಕಾರ್ಯನಿರ್ವಹಣೆಯ ಕುರಿತು ಚರ್ಚೆಗಳು ನಡೆಯಬಹುದು.

><><><><

ನವೆಂಬರ್ ೧ ರಿಂದ ಇತರೆ ದೇಶಗಳಿಂದ ಅಮೆರಿಕಕ್ಕೆ ಬರುವ ಎಲ್ಲಾ ಮಧ್ಯಮ ಮತ್ತು ಭಾರೀ ಟ್ರಕ್‌ಗಳ ಮೇಲೆ ತಮ್ಮ ಆಡಳಿತವು ಶೇಕಡಾ ೨೫ ರಷ್ಟು ಸುಂಕವನ್ನು ವಿಧಿಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.

ಅಮೆರಿಕನ್ ಟ್ರಕ್ಕಿಂಗ್ ಅಸೋಸಿಯೇಷನ್‌ಗಳ ಪ್ರಕಾರ, ಅಮೆರಿಕದ ಟ್ರಕ್ಕಿಂಗ್ ಉದ್ಯಮವು ರಾಷ್ಟ್ರೀಯ ಆರ್ಥಿಕತೆಯ ಮೂಲಾಧಾರವಾಗಿದ್ದು, ಎಲ್ಲಾ ದೇಶೀಯ ಸರಕು ಸಾಗಣೆಯ ಸುಮಾರು ಶೇಕಡಾ ೭೨ ರಷ್ಟು ಸಾಗಣೆ ಮಾಡುತ್ತದೆ. ಯುಎಸ್ ಚೇಂಬರ್ ಆಫ್ ಕಾಮರ್ಸ್ ಒದಗಿಸಿದ ಮಾಹಿತಿಯ ಪ್ರಕಾರ, ಸುಮಾರು ಎರಡು ಮಿಲಿಯನ್ ಅಮೆರಿಕನ್ನರು ಹೆವಿ ಮತ್ತು ಟ್ರಾಕ್ಟರ್-ಟ್ರೇಲರ್ ಟ್ರಕ್ ಚಾಲಕರಾಗಿ ಕೆಲಸ ಮಾಡುತ್ತಾರೆ. ಇನ್ನೂ ಅನೇಕರು ಮೆಕ್ಯಾನಿಕ್‌ಗಳು ಮತ್ತು ಸಹಾಯಕ ಸಿಬ್ಬಂದಿಯಾಗಿ ಕೆಲಸ ಮಾಡುತ್ತಾರೆ.

><><><><

ಜಗತ್ತು ಹೆಚ್ಚು ಸ್ಪರ್ಧೆಗೆ ಸಾಕ್ಷಿಯಾಗುತ್ತಿದೆ. ಅಂತಹ ಪರಿಸರದ ನಡುವೆ ಭಾರತ ಕಾರ್ಯತಂತ್ರ ರೂಪಿಸಬೇಕು ಮತ್ತು ಏಳಿಗೆಯಾಗುತ್ತಲೇ ಇರಬೇಕು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯ  ಜೆಎನ್‌ಯು ಸ್ಕೂಲ್ ಆಫ್ ಇಂಟರ್ನ್ಯಾಷನಲ್ ಸ್ಟಡೀಸ್‌ನಲ್ಲಿ ಅರವಳ್ಳಿ ಶೃಂಗಸಭೆಯ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಡಾ. ಜೈಶಂಕರ್, ಒಂದು ರಾಷ್ಟ್ರದ ವ್ಯಕ್ತಿತ್ವವನ್ನು ಅದರ ಆಲೋಚನೆಗಳ ಶಕ್ತಿಯಿಂದ ನಿರ್ಣಯಿಸಲಾಗುತ್ತದೆ ಎಂದು ಹೇಳಿದರು. ವಿಕಸನಗೊಳ್ಳುತ್ತಿರುವ ಜಾಗತಿಕ ಭೂದೃಶ್ಯದ ಸವಾಲುಗಳು, ಅದರ ಕಾರ್ಯತಂತ್ರದ ಪರಿಣಾಮಗಳು ಮತ್ತು ಅದರ ರಾಷ್ಟ್ರೀಯ ಹಿತಾಸಕ್ತಿಗಳನ್ನು ಮುನ್ನಡೆಸುವ ಭಾರತದ ವಿಧಾನದ ಬಗ್ಗೆಯೂ ಅವರು ಮಾತನಾಡಿದರು.

ಧ್ವನಿ: ಡಾ. ಎಸ್. ಜೈಶಂಕರ್ (  ೨೫ ಸೆಕೆಂಡ್)

ಏಳು ದಶಕಗಳ ಶೈಕ್ಷಣಿಕ ಶ್ರೇಷ್ಠತೆ ಮತ್ತು ಬೌದ್ಧಿಕ ಸ್ವಾತಂತ್ರ್ಯವನ್ನು ಗುರುತಿಸುವ ಸ್ಕೂಲ್ ಆಫ್ ಇಂಟರ್‌ನ್ಯಾಷನಲ್ ಸ್ಟಡೀಸ್‌ನ ೭೦ ವರ್ಷಗಳ ಆಚರಣೆಯ ಭಾಗವಾಗಿದೆ. ಈ ಶೃಂಗಸಭೆ ಪ್ರದೇಶ ಅಧ್ಯಯನಗಳಲ್ಲಿ ಮುಂಚೂಣಿಯಲ್ಲಿದೆ. ಪರಮಾಣು ನೀತಿ, ಪ್ರಾದೇಶಿಕತೆ ಮತ್ತು ಆಡಳಿತದ ಕುರಿತು ರಾಷ್ಟ್ರೀಯ ಮತ್ತು ಜಾಗತಿಕ ಚರ್ಚೆಗಳನ್ನು ರೂಪಿಸಿದೆ.

><><><><

ವಿಶಾಖಪಟ್ಟಣದ ನೌಕಾ ಡಾಕ್‌ಯಾರ್ಡ್‌ನಲ್ಲಿ ಎರಡನೇ ಜಲಾಂತರ್ಗಾಮಿ ವಿರೋಧಿ ಯುದ್ಧ ನೌಕೆ ಐಎನ್‌ಎಸ್ ಆಂಡ್ರೋತ್ ನಿನ್ನೆ ಭಾರತೀಯ ನೌಕಾಪಡೆಗೆ ಸೇರ್ಪಡೆಯಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಪೂರ್ವ ನೌಕಾ ಕಮಾಂಡ್‌ನ ಫ್ಲ್ಯಾಗ್ ಆಫೀಸರ್ ಕಮಾಂಡಿಂಗ್-ಇನ್-ಚೀಫ್ ವೈಸ್ ಅಡ್ಮಿರಲ್ ರಾಜೇಶ್ ಪೆಂಧಾರ್ಕರ್ ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಐಎನ್‌ಎಸ್ ಆಂಡ್ರೋತ್‌ನಂತಹ ಸ್ಥಳೀಯವಾಗಿ ನಿರ್ಮಿಸಲಾದ ನೌಕೆಗಳು ಭಾರತದ ಕಡಲ ಬಲವನ್ನು ಹೆಚ್ಚಿಸುತ್ತವೆ ಮತ್ತು ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸುತ್ತವೆ ಎಂದು ಹೇಳಿದರು. ಶೇಕಡ ೮೦ ಕ್ಕಿಂತ ಹೆಚ್ಚು ಸ್ಥಳೀಯ ಉತ್ಪನ್ನಗಳೊಂದಿಗೆ ನಿರ್ಮಿಸಲಾದ ಐಎನ್‌ಎಸ್ ಆಂಡ್ರೋತ್, ೭೭ ಮೀಟರ್ ಉದ್ದವಾಗಿದೆ ಮತ್ತು ಸುಮಾರು ೧ ಸಾವಿರದ ೫೦೦ ಟನ್ ತೂಕವಿದೆ. ಇದನ್ನು ಕರಾವಳಿ ಮತ್ತು ಆಳವಿಲ್ಲದ ನೀರಿನಲ್ಲಿ ಜಲಾಂತರ್ಗಾಮಿ ವಿರೋಧಿ ಕಾರ್ಯಾಚರಣೆಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಕಡಲ ಬೆದರಿಕೆಗಳನ್ನು ನಿಖರವಾಗಿ ಪತ್ತೆಹಚ್ಚಲು ಮತ್ತು ತಟಸ್ಥಗೊಳಿಸಲು ಸುಧಾರಿತ ಶಸ್ತ್ರಾಸ್ತ್ರಗಳು, ಸಂವೇದಕಗಳು ಮತ್ತು ಸಂವಹನ ವ್ಯವಸ್ಥೆಗಳನ್ನು ನೌಕೆಯಲ್ಲಿ ಅಳವಡಿಸಲಾಗಿದೆ.

ಜೊತೆಗೆ ಕಡಲ ಕಣ್ಗಾವಲು, ಹುಡುಕಾಟ, ಕರಾವಳಿ ರಕ್ಷಣೆ ಮತ್ತು ಕಡಿಮೆ-ತೀವ್ರತೆಯ ಕಡಲ ಕಾರ್ಯಾಚರಣೆಗಳನ್ನು ಈ ನೌಕೆ ನಿರ್ವಹಿಸಬಹುದು.

><><><><><

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್‌ನಲ್ಲಿ ದಕ್ಷಿಣ ಆಫ್ರಿಕಾ ತಂಡ, ನ್ಯೂಜಿಲೆಂಡ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿತು. ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ ೪೭.೫ ಓವರ್‌ಗಳಲ್ಲಿ ೨೩೧ ರನ್ ಗಳಿಸಿ ಆಲೌಟ್ ಆಯಿತು. ದಕ್ಷಿಣ ಆಫ್ರಿಕಾ ಪರ ನಾನ್‌ಕುಲುಲೆಕೊ ಮ್ಲಾಬಾ ನಾಲ್ಕು ವಿಕೆಟ್ ಪಡೆದರೆ, ಮರಿಜಾನ್ನೆ ಕಪ್, ಅಯಬೊಂಗಾ ಖಾಕಾ, ನಾಡಿನ್ ಡಿ ಕ್ಲರ್ಕ್ ಮತ್ತು ಕ್ಲೋಯ್ ಟ್ರಯಾನ್ ತಲಾ ಒಂದು ವಿಕೆಟ್ ಪಡೆದರು. ಈ ಗುರಿ ಬೆನ್ನತ್ತಿದ ದಕ್ಷಿಣ ಆಫ್ರಿಕಾ ತಂಡ, ೪೦.೫ ಓವರ್‌ಗಳಲ್ಲಿ ೪ ವಿಕೆಟ್‌ಗಳಿಗೆ ೨೩೪ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ದಕ್ಷಿಣ ಆಫ್ರಿಕಾ ಪರ ಟಾಜ್ಮಿನ್ ಬ್ರಿಟ್ಸ್ ೧೦೧ ರನ್ ಗಳಿಸಿದರೆ, ಸುನೆ ಲೂಸ್ ಅಜೇಯ ೮೩ ರನ್ ಗಳಿಸಿದರು. ಗುವಾಹಟಿಯ ಬರ್ಸಪರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು, ಇಂಗ್ಲೆಂಡ್ ತಂಡ, ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

><><><><><